# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಹೆಚ್. ಖಲೀಲ್ ರೆಹಮಾನ್, ಅಂದಿನ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, ಗದಗ ಇವರ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ.

**ಓದಲಾಗಿದೆ.**

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 21 ಇಎಸ್‌ಕ್ಯೂ 2004, ದಿನಾಂಕ. 18-04-2009
2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 81 ಜಿಪಅ 2009 ದಿನಾಂಕ. 11-09-2009
3. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 81 ಜಿಪಅ 2009 ದಿನಾಂಕ. 15-07-2011
4. ಶ್ರೀ ಹೆಚ್. ಖಲೀಲ್ ರೆಹಮಾನ್ ರವರು ಸಲ್ಲಿಸಿರುವ ಮನವಿ ದಿನಾಂಕ. 22-02-2012.

**ಪ್ರಸ್ತಾವನೆ:**

ಶ್ರೀ ಹೆಚ್. ಖಲೀಲ್ ರೆಹಮಾನ್ ಇವರು ಈ ಹಿಂದೆ ಜಿಲ್ಲಾ ಪಂಚಾಯತ್, ಗದಗ ಇಲ್ಲಿ ಮುಖ್ಯ ಲೆಕ್ಕಾಧಿಕಾರಿಯಾಗಿ ಕರ್ತವ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಮುಂಡರಗಿ ಇಲ್ಲಿ ಉಗ್ರಾಣ ಸಾಮಾಗ್ರಿಗಳ ಕೊರತೆಗೆ ಕಾರಣರಾಗಿದ್ದ ಶ್ರೀ ಜಿ.ಬಿ.ಸಂದಿ, ಕಿರಿಯ ಇಂಜಿನಿಯರ್ ಮತ್ತು ಶ್ರೀ ಎಂ.ಬಿ.ರಾಜಶೇಖರ, ಸಹಾಯಕ ಇಂಜಿನಿಯರ್ ರವರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆಯಲ್ಲಿ ಮಂಡನಾಧಿಕಾರಿಯನ್ನಾಗಿ ನೇಮಿಸಿದ್ದು, ಇವರು ವಿಚಾರಣಾಧಿಕಾರಿಗಳ ಮುಂದೆ ದಾಸ್ತಾವೇಜುಗಳನ್ನು / ಸಾಕ್ಷಿಗಳನ್ನು ಹಾಜರುಪಡಿಸುವಲ್ಲಿ ವಿಫಲರಾದ ಆರೋಪದ ಬಗ್ಗೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 18-04-2009ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು. ನಂತರ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 11-09-2009ರ ಆದೇಶದಲ್ಲಿ ಅಮಾನತ್ತನ್ನು ತೆರವುಗೊಳಿಸಲಾಗಿತ್ತು.

ಶ್ರೀ ಹೆಚ್. ಖಲೀಲ್ ರೆಹಮಾನ್ ಇವರ ವಿರುದ್ಧ ಮೇಲ್ಕಂಡ ಆರೋಪಗಳ ಮೇಲೆ ಜರುಗಿಸಿದ ಇಲಾಖಾ ವಿಚಾರಣೆಯಲ್ಲಿ ಆರೋಪಗಳು ಸಾಬೀತಾಗಿರುವುದರಿಂದ ಮೇಲೆ ಕ್ರಮ ಸಂಖ್ಯೆ. (3)ರಲ್ಲಿ ಓದಲಾದ ದಿನಾಂಕ. 15-07-2011ರ ಆದೇಶದಲ್ಲಿ ವಾಗ್ದಂಡನೆಯನ್ನು ವಿಧಿಸಲಾಗಿತ್ತು.

ಶ್ರೀ ಹೆಚ್. ಖಲೀಲ್ ರೆಹಮಾನ್, ಮುಖ್ಯ ಲೆಕ್ಕಾಧಿಕಾರಿ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ. (4)ರಲ್ಲಿ ಓದಲಾದ ದಿನಾಂಕ. 22-02-2012ರಂದು ಸಲ್ಲಿಸಿರುವ ಮನವಿಯಲ್ಲಿ ಅವರು ದಿನಾಂಕ. 18-04-2009 ರಿಂದ 12-09-2009 ರವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವಂತೆ ಕೋರಿದ್ದಾರೆ.

----2

ಶ್ರೀ ಹೆಚ್. ಖಲೀಲ್ ರೆಹಮಾನ್ ಇವರು ಸಲ್ಲಿಸಿರುವ ಮನವಿಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ. ಗ್ರಾಅಪ 2 ಇಎನ್‌ಕ್ಯೂ 2012, ಬೆಂಗಳೂರು,**
**ದಿನಾಂಕ. 22-03-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣದಿಂದ ಶ್ರೀ ಹೆಚ್. ಖಲೀಲ್ ರೆಹಮಾನ್, ಮುಖ್ಯ ಲೆಕ್ಕಾಧಿಕಾರಿ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇವರು ದಿನಾಂಕ. 18-04-2009 ರಿಂದ 12-09-2009 ರವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/3/12
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ / ಚಿತ್ರದುರ್ಗ
6. ನಿಯಂತ್ರಕರು, ರಾಜ್ಯ ಲೆಕ್ಕ ಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ಶ್ರೀ ಹೆಚ್. ಖಲೀಲ್ ರೆಹಮಾನ್, ಮುಖ್ಯ ಲೆಕ್ಕಾಧಿಕಾರಿ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ನಂ.6 ಜಲಭವನ, 1ನೇ ಹಂತ, 1ನೇ ಸ್ಟೇಜ್, ಬಿ.ಟಿ.ಎಂ. ಲೇಔಟ್, ಬನ್ನೇರುಘಟ್ಟ ಮುಖ್ಯರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
9. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
10. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
11. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.